# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 599

ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜ್

ಉತ್ತರಿಸಬೇಕಾದ ದಿನಾಂಕ : 04.03.2021.

ಉತ್ತರಿಸುವ ಸಚಿವರು : ಗೃಹ ಸಚಿವರು.

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ | ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ಸೂಕ್ತ ಭದ್ರತೆ ಗಸ್ತು ಇಲ್ಲದೇ ಅಕ್ರಮ ಚಟುವಟಿಕೆಗಳು ಕುಡುಕರ ಹಾವಳಿಯಿಂದ ಸಾರ್ವಜನಿಕರಿಗೆ ಕೆಲಸಗಾರರಿಗೆ, ಭಯಗ್ರಸ್ಥ ವಾತಾವರಣ ಉಂಟಾಗಿ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| ಆ | ಈ ಪ್ರದೇಶದಲ್ಲಿ ಒಂದು ಪೊಲೀಸ್ ಔಟ್ ಪೋಸ್ಟ್ ಸ್ಥಾಪಿಸಿ ಪೊಲೀಸ್ ಗಸ್ತು ಹೆಚ್ಚಿಸಿ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ? | ಮೈಸೂರು ಜಿಲ್ಲೆಯ ಮೈಸೂರು ದಕ್ಷಿಣ ಪೊಲೀಸ್ ಠಾಣಾ ಅಧೀನದಲ್ಲಿ ಕಡಕೊಳ ಹೊರ ಪೊಲೀಸ್ ಠಾಣೆಯು ಪ್ರಸ್ತುತ ಕಾರ್ಯನಿರ್ವಹಿಸುತ್ತಿದೆ.<br><br>ಮೈಸೂರು ದಕ್ಷಿಣ ಪೊಲೀಸ್ ಠಾಣೆ ಮತ್ತು ಕಡಕೊಳ ಹೊರ ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ಮತ್ತು ಉಪ ಠಾಣಾ ವ್ಯಾಪ್ತಿಯ ಹಳ್ಳಿಗಳಲ್ಲಿ ಗಸ್ತು ಕರ್ತವ್ಯ ನಿರ್ವಹಿಸಿ, ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿರುತ್ತದೆ. |

**ಹೆಚ್ ಡಿ 155 ಎಸ್‌ಎಸ್‌ಟಿ 2021**

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು